| |
|---|
| **Deposition Sheets (RP.No.57) Form No.4** |

**IN THE COURT OF ADDL. CIVIL JUDGE & J.M.F.C., KARKALA.**

**Criminal Case No. 1405/2024**

ಪಿಡ್ಲ್ಯೂಃ 6 ಸಿಡ್ಲ್ಯೂಃ 7

ಸಾಕ್ಷಿದಾರನ ಹೆಸರು : ರಂಗನಾಥ ಪೂಜಾರಿ

ತಂದೆಯ ಹೆಸರು : ಗುಮ್ಮಣ್ಣ ಪೂಜಾರಿ

ಪ್ರಾಯ : 53 ವರ್ಷ

ಉದ್ಯೋಗ : ಹೋಟೆಲ್

ವಾಸ : ನಾಡ್ಪಾಲ್ ಗ್ರಾಮ ಸೊಮೇಶ್ವರ

ದಿನಾಂಕ 19.09.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರುಃ-

ಈ ದಿನ ನ್ಯಾಯಾಲಯದ ಮುಂದೆ ಇರುವ ಅರೋಪಿಯನ್ನು ನೋಡಿ ಗುರುತಿಸಿದ್ದೇನೆ.

ಚಾಸಾ-5 ಮತ್ತು 6 ರವರ ಪರಿಚಯ ಇದೆ.

ದಿಃ24.06.2024 ರಂದು ಪೊಲೀಸರು ನನ್ನನ್ನು ಠಾಣೆಗೆ ಕರೆದಿರುತ್ತಾರೆ. ನನ್ನ ಸಮಕ್ಷಮ ಆರೋಪಿಯನ್ನು ದಸ್ತಗಿರಿ ಮಾಡಿ ಯಾವುದೇ ಸ್ವತ್ತುಗಳನ್ನು ಸ್ವಾಧೀನಪಡಿಸಿಕೊಂಡಿರುವುದಿಲ್ಲ. ಈ ಪ್ರಕರಣದ ಕುರಿತು ಪೊಲೀಸರು ವಿಚಾರಣೆ ಮಾಡಿ ಹೇಳಿಕೆ ಪಡೆದುಕೊಂಡಿರುವುದಿಲ್ಲ. ನ್ಯಾಯಾಲಯದ ಮುಂದೆ ಇರುವ ಮು ಮಾ-1 ರಿಂದ 7 ಸ್ವತ್ತುಗಳನ್ನು ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ</u> <u>ಸಹಾಯಕ ಸರ್ಕಾರಿ ಅಭಿಯೋಜಕರುಃ-</u>

ದಿನಾಂಕ 23.06.2024 ರಂದು ನಾನು ನನ್ನ ಮೋಟಾರು ಸೈಕಲ್ ನಲ್ಲಿ ನಾಡ್ಪಾಲ್ ಗ್ರಾಮದ ಸೋಮೇಶ್ವರದಿಂದ ಕಾಸನಮಕ್ಕಿಗೆ ಹೋಗುತ್ತಿರುವಾಗ ಸಾರ್ವಜನಿಕ ಸ್ಥಳದಲ್ಲಿ ಪೊಲೀಸರು ಮತ್ತು ಇತರರು ಸೇರಿದ್ದು ,ಆರೋಪಿಯು ಅಕ್ರಮವಾಗಿ ಮದ್ಯವನ್ನು ಮಾರಾಟ ಮಾಡುತ್ತಿದ್ದು ಆತನನ್ನು ಪೊಲೀಸರು ವಶಕ್ಕೆ ಪಡೆದುಕೊಂಡು ಮತ್ತು ಆತನ ಸ್ವಾ ಧೀನದಲ್ಲಿದ್ದ ಮುಮಾ 1 ರಿಂದ 7 ನ್ನು ಸ್ವಾ ಧೀನಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದನ್ನು ನಾನು ಪ್ರತ್ಯಕ್ಷವಾಗಿ ನೋಡಿರುತ್ತೇನೆ ಎಂದರೆ ಸರಿಯಲ್ಲ. ಈ ಬಗ್ಗೆ ದಿಃ24.06.2024 ರಂದು ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಹೇಳಿಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ-6 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು :</u> ಆರೋಪಿ ಪರ : ಶ್ರೀ ಹೆಚ್ ಆರ್ ಕೆ ವಕೀಲರಿಂದಃ ಏನು ಇಲ್ಲ.

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.
ಓದಿ ಹೇಳಿ ಕೇಳಿ ಸರಿ ಇದೆ.

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಕಾರ್ಕಳ